ಹೆಲ್ಪ್‌ಲೈನ್/ Helpline : 080-25582559
ಈಮೇಲ್/ E-mail : contact@kspcb.gov.in
ವೆಬ್‌ಸೈಟ್/ Website : kspcb.karnataka.gov.in

080-25581383, 25589112
080-25589113, 25589114

# ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ
# Karnataka State Polution Control Board

"ಪರಿಸರ ಭವನ", 1 ರಿಂದ 5ನೇ ಮಹಡಿಗಳು, ನಂ.49, ಚರ್ಚ್ ಸ್ಟ್ರೀಟ್, ಬೆಂಗಳೂರು-560001, ಕರ್ನಾಟಕ ರಾಜ್ಯ, ಭಾರತ
"Parisara Bhavan", 1st to 5th Floor, # 49, Church Street, Bangalore - 560 001, Karnataka State, India

ಸಂಖ್ಯೆ: ಮಾನಿಮ/ತ್ಯಾನಿವಿ/PLS/2022-23 | 137 ದಿನಾಂಕ: 16 JUL 2022

**ಮೆಮೊ**

ವಿಷಯ:- Direction under Section 5 of the Environment (Protection) Act, 1986 to all SPCB's for implementation of ban on Single Use Plastic (SUP) –reg.

ಉಲ್ಲೇಖ:-
1. ಭಾರತ ರಾಜ್ಯಪತ್ರದಲ್ಲಿನ ಅಧಿಸೂಚನೆ ದಿನಾಂಕ: 12.08.2021
2. ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯು ನೀಡಿರುವ ಡಿಸೆಂಬರ್, 2020 ರ ಮಾರ್ಗಸೂಚಿ
3. ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ ನಿರ್ದೇಶನ ಪತ್ರ B.17011/7/UPC-II-PWM(SUP)/2022, ದಿನಾಂಕ: 01.02.2022
4. ಮಂಡಳಿಯ ಪತ್ರ ದಿನಾಂಕ: 17.06.2022
5. ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ ನಿರ್ದೇಶನ ಪತ್ರ ಸಂಖ್ಯೆ: B.17011/7/UPC-II-PWM(SUP)/2022, dtd: 30.06.2022
6. ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: FEE 77 ENG 2022, Bengaluru ದಿನಾಂಕ: 30.06.2022

********

ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ, (MoEF & CC) ನವದೆಹಲಿ ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ (ತಿದ್ದುಪಡಿ) ನಿಯಮಗಳು, 2021 ರಲ್ಲಿ ಮೇಲಿನ ನಿಷೇಧಿತ ಉತ್ಪನ್ನಗಳ ಜೊತೆಗೆ ಕೆಳಗಿನ ಹೆಚ್ಚುವರಿ ಏಕ ಬಳಕೆಯ ಪ್ಲಾಸ್ಟಿಕ್ ಉತ್ಪನ್ನಗಳನ್ನು 1ನೇ ಜುಲೈ 2022 ರಿಂದ ಜಾರಿಗೆ ಬರುವಂತೆ ನಿಷೇಧಿಸಿ ದಿನಾಂಕ 12ನೇ ಆಗಸ್ಟ್, 2021 ರಂದು ಅಧಿಸೂಚನೆ (G.S.R.No. 571 (E)) ಯನ್ನು ಹೊರಡಿಸಿದೆ.

ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ ನಿಯಮಗಳು, 2016 ರ ನಿಯಮ 4(2) ರ ಪ್ರಕಾರ (ತಿದ್ದುಪಡಿ), "ಪಾಲಿಸ್ಟೈರೀನ್ ಮತ್ತು ವಿಸ್ತರಿತ ಪಾಲಿಸ್ಟೈರೀನ್ ಸೇರಿದಂತೆ ಕೆಳಗಿನ ಏಕ ಬಳಕೆಯ ಪ್ಲಾಸ್ಟಿಕ್ (SUP) ತಯಾರಿಕೆ, ಆಮದು, ಸಂಗ್ರಹಣೆ, ವಿತರಣೆ, ಮಾರಾಟ ಮತ್ತು ಬಳಕೆಯನ್ನು ಜುಲೈ 1, 2022 ರಿಂದ ಜಾರಿಗೆ ಬರುವಂತೆ ನಿಷೇಧಿಸಲಾಗಿದೆ.

*(ಎ) ಪ್ಲಾಸ್ಟಿಕ್ ಸ್ಟಿಕ್‌ಗಳೊಂದಿಗೆ ಇಯರ್ ಬಡ್‌ಗಳು, ಬಲೂನ್‌ಗಳಿಗೆ ಬಳಸುವ ಪ್ಲಾಸ್ಟಿಕ್ ಸ್ಟಿಕ್‌ಗಳು, ಪ್ಲಾಸ್ಟಿಕ್ ಧ್ವಜಗಳು, ಪ್ಲಾಸ್ಟಿಕ್ ಕ್ಯಾಂಡಿ ಸ್ಟಿಕ್‌ಗಳು, ಪ್ಲಾಸ್ಟಿಕ್ ಐಸ್‌ಕ್ರೀಮ್ ಸ್ಟಿಕ್‌ಗಳು, ಅಲಂಕಾರಕ್ಕಾಗಿ ಬಳಸುವ ಪಾಲಿಸ್ಟೈರೀನ್ [ಥರ್ಮಾಕೋಲ್]*

*(ಬಿ) ಪ್ಲಾಸ್ಟಿಕ್ ಪ್ಲೇಟ್‌ಗಳು, ಪ್ಲಾಸ್ಟಿಕ್ ಕಪ್‌ಗಳು ಮತ್ತು ಲೋಟಗಳು, ಫೋರ್ಕ್‌ಗಳು, ಪ್ಲಾಸ್ಟಿಕ್ ಚಮಚಗಳು, ಪ್ಲಾಸ್ಟಿಕ್ ಚಾಕುಗಳು, ಪ್ಲಾಸ್ಟಿಕ್ ಟ್ರೇಗಳಂತಹ ಕಟ್ಲರಿಗಳು, ಸ್ವೀಟ್ ಬಾಕ್ಸ್‌ಗಳ ಸುತ್ತ ಸುತ್ತುವ ಅಥವಾ ಪ್ಯಾಕಿಂಗ್ ಫಿಲ್ಮ್‌ಗಳು, ಆಮಂತ್ರಣ ಪತ್ರಗಳು ಮತ್ತು ಸಿಗರೇಟ್ ಪ್ಯಾಕೆಟ್‌ಗಳು, 100 ಮೈಕ್ರಾನ್‌ಗಿಂತ ಕಡಿಮೆ ದಪ್ಪದ ಪ್ಲಾಸ್ಟಿಕ್ ಅಥವಾ* ***PVC*** *ಬ್ಯಾನರ್‌ಗಳು, ಪ್ಲಾಸ್ಟಿಕ್ ಸ್ಟಿರರ್‌ಗಳು.*

ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯದ (MoEF & CC) ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಿದ ಟೈಮ್‌ಲೈನ್‌ಗಳ ಪ್ರಕಾರ ಮೇಲಿನ ಎಲ್ಲಾ ವಸ್ತುಗಳ ಉತ್ಪಾದಕರು, ದಾಸ್ತಾನುದಾರರು, ಚಿಲ್ಲರೆ ವ್ಯಾಪಾರಿಗಳು, ಅಂಗಡಿ ಮಾಲೀಕರುಗಳು, ಇ-ಕಾಮರ್ಸ್ ಕಂಪನಿಗಳು, ಬೀದಿ ವ್ಯಾಪಾರಿಗಳು, ವಾಣಿಜ್ಯ ಸಂಸ್ಥೆಗಳು (ಮಾಲ್‌ಗಳು / ಮಾರುಕಟ್ಟೆ ಸ್ಥಳ / ಶಾಪಿಂಗ್ ಕೇಂದ್ರಗಳು/ ಸಿನಿಮಾ ಮನೆಗಳು/ ಪ್ರವಾಸೋದ್ಯಮ ಸ್ಥಳಗಳು/ ಶಾಲೆಗಳು/ ಕಾಲೇಜುಗಳು, ಕಛೇರಿ ಸಂಕೀರ್ಣಗಳು/ ಆಸ್ಪತ್ರೆಗಳು, ಇತರೆ ಸಂಸ್ಥೆಗಳು ಮತ್ತು ಸಾಮಾನ್ಯ ಸಾರ್ವಜನಿಕರಿಗೆ ನಿಷೇಧಿತ ಏಕ ಬಳಕೆಯ ಪ್ಲಾಸ್ಟಿಕ್ ಉತ್ಪಾದನೆ, ಸಂಗ್ರಹಣೆ, ವಿತರಣೆ, ಮಾರಾಟ ಮತ್ತು ಬಳಕೆಯನ್ನು ಕಟ್ಟುನಿಟ್ಟಾಗಿ ನಿಲ್ಲಿಸುವಂತೆ ಈಗಾಗಲೇ ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ ಮತ್ತು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಸೂಕ್ತ ನಿರ್ದೇಶನಗಳನ್ನು ನೀಡಲಾಗಿರುತ್ತದೆ.

ಇದರನ್ವಯ ಪ್ರಾದೇಶಿಕ ಕಛೇರಿಗಳು ನಿಷೇಧಿತ ಏಕ ಬಳಕೆಯ ಪ್ಲಾಸ್ಟಿಕ್ ಬಗ್ಗೆ ತೆಗೆದುಕೊಂಡ ಕ್ರಮಗಳ ವಿವರಗಳನ್ನು ಮಂಡಳಿಗೆ ಸಲ್ಲಿಸುವಂತೆ ಉಲ್ಲೇಖ (4) ರ ಪತ್ರದಲ್ಲಿ ಕೋರಲಾಗಿರುತ್ತದೆ.

ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ. FEE 17 EPC 2012, ದಿನಾಂಕ:11.03.2016 ಹಾಗೂ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ, (MoEF & CC) ನವದೆಹಲಿ ಇವರ ದಿನಾಂಕ: 12.08.2021 ಅಧಿಸೂಚನೆಗೆ ಸಂಬಂಧಪಟ್ಟಂತೆ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ, ಕರ್ನಾಟಕ ಸರ್ಕಾರ ಇವರ ದಿನಾಂಕ: 30.06.2022 ರಂದು ಸುತ್ತೋಲೆಯನ್ನು ಹೊರಡಿಸಿದ್ದು, ಸದರಿ ಅಧಿಸೂಚನೆಗಳು ಪ್ರಸ್ತುತ ರಾಜ್ಯದಲ್ಲಿ ಚಾಲ್ತಿಯಲ್ಲಿರುತ್ತದೆ.

ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯು ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್‌ಗೆ ಸಂಬಂಧಪಟ್ಟಂತೆ CPCB Monitoring Module for Compliance of SUP and SUP Public Grievance Redressed App ಅನ್ನು ಅಭಿವೃದ್ಧಿಪಡಿಸಿ ಬಳಸಲು ಸೂಚಿಸಲಾಗಿದ್ದು, ಈಗಾಗಲೇ ಎಲ್ಲಾ ರಾಜ್ಯದ ಮಾಲಿನ್ಯ ನಿಯಂತ್ರಣ ಮಂಡಳಿಗಳ ಹಾಗೂ ಸ್ಥಳೀಯ ಸಂಸ್ಥೆಗಳ User login credential ಗಳನ್ನು ಒದಗಿಸಿರುತ್ತದೆ. ಆದ್ದರಿಂದ ಪ್ರಾದೇಶಿಕ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸ್ಥಳಿಯ ಸಂಸ್ಥೆಗಳಿಗೆ ಸದರಿ ಪೋರ್ಟಲ್‌ಗಳ ಬಗ್ಗೆ ತರಬೇತಿ / ವರ್ಕ್‌ಶಾಪ್‌ಗಳನ್ನು ಆಯೋಜಿಸಿ ತರಬೇತಿಯನ್ನು ನೀಡಬೇಕಾಗಿ ಆದೇಶಿಸಲಾಗಿದೆ ಹಾಗೂ **ಎಲ್ಲಾ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಗಳು ಹಾಗೂ ಸ್ಥಳೀಯ ಸಂಸ್ಥೆಗಳು ಜುಲೈ 2022 ರ 3ನೇ ವಾರದಿಂದ ಅಂದರೆ ದಿನಾಂಕ: 18.07.2022** ರಿಂದ ಸದರಿ ನಿಷೇಧದ ದೈನಂದಿನ ವಿವರಗಳನ್ನು ಕಟ್ಟುನಿಟ್ಟಾಗಿ ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ SUP ಪೋರ್ಟಲ್‌ಗಳಲ್ಲಿ upload ಮಾಡಲು ಸೂಚಿಸಲಾಗಿದೆ.

ಮುಂದುವರೆದಂತೆ, ಈಗಾಗಲೇ ಮಂಡಳಿಯ ಸುತ್ತೋಲೆ ಸಂಖ್ಯೆ: 1904 ದಿನಾಂಕ: 14.06.2022 ರಲ್ಲಿ ಎಲ್ಲಾ ಪ್ರಾದೇಶಿಕ ಅಧಿಕಾರಿಗಳಿಗೆ ತಮ್ಮ ವ್ಯಾಪ್ತಿಯಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣಾ ನಿಯಮ, 2016 ರಡಿಯಲ್ಲಿ ಬರುವ ಎಲ್ಲಾ PIBOs and PWPs ಘಟಕಗಳು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ Centralized EPR Portal ನಲ್ಲಿ 30 ದಿನಗಳೊಳಗೆ ನೋಂದಾಯಿಸಿಕೊಳ್ಳಲು ಆದೇಶಿಸಲಾಗಿತ್ತು.

ದಿನಾಂಕ: 15.07.2022 ರಂದು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ನಡೆದ ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್‌ನ ಪರಿಶೀಲನಾ ಸಭೆಯಲ್ಲಿ ರಾಜ್ಯದಿಂದ ನೋಂದಾಯಿತರಾಗಿರುವ PIBOs and PWPs ಘಟಕಗಳ ಸಂಖ್ಯೆ ಅತಿ ಕಡಿಮೆಯಿದ್ದು, **7 ದಿನಗಳೊಳಗೆ ತಮ್ಮ ವ್ಯಾಪ್ತಿಯಲ್ಲಿ ಬರುವ ಈಗಾಗಲೇ ಸಮ್ಮತಿ ಪತ್ರ ಪಡೆದಿರುವ ಮತ್ತು ಅವಧಿ ಇರುವ ನೋಂದಾಯಿತ ಪ್ಲಾಸ್ಟಿಕ್ ಘಟಕಗಳು ಹಾಗೂ ಹೊಸದಾಗಿ ನೋಂದಾಯಿಸಬೇಕಾಗಿರುವ** (PIBOs and PWPs) ಘಟಕಗಳು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ Centralized EPR Portal ನಲ್ಲೇ ನೋಂದಾಯಿಸಬೇಕಾಗಿ ಕ್ರಮಕೈಗೊಳ್ಳಲು ಆದೇಶಿಸಿರುತ್ತಾರೆ, ತಪ್ಪಿದ್ದಲ್ಲಿ ಸದರಿ ಘಟಕಗಳ ಸಮ್ಮತಿ ಪತ್ರ (Consent) ಮತ್ತು ನೋಂದಾಯಿತ ಪತ್ರ (Plastic Registration Certificate) ಗಳನ್ನು ಸಾಮೂಹಿಕವಾಗಿ ಮಂಡಳಿಯಿಂದ ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ ಆದೇಶದನ್ವಯ ಹಿಂಪಡೆಯಲು **(Withdraw)** ಕ್ರಮ ಕೈಗೊಳ್ಳಲಾಗುವುದು.

ಆದುದರಿಂದ ಎಲ್ಲಾ ಪ್ರಾದೇಶಿಕ ಅಧಿಕಾರಿಗಳು ತಪ್ಪದೇ ತಮ್ಮ ವ್ಯಾಪ್ತಿಯಲ್ಲಿ ಬರುವ ಮೇಲಿನ ಘಟಕಗಳು ನೋಂದಾಯಿಸಿಕೊಳ್ಳಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಆದೇಶಿಸಲಾಗಿದೆ. ತಪ್ಪಿದ್ದಲ್ಲಿ ಪ್ರಾದೇಶಿಕ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮವನ್ನು ಜರುಗಿಸಲಾಗುವುದು.

ಸದಸ್ಯ ಕಾರ್ಯದರ್ಶಿ
**ಕರಾಮಾನಿಮಂ, ಬೆಂಗಳೂರು**

**ಗೆ,**
**ಎಲ್ಲಾ ಪ್ರಾದೇಶಿಕ ಅಧಿಕಾರಿಗಳು**